ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ
ನಿರ್ದೇಶಕರು, ಕೈಮಗ್ಗ ಮತ್ತು ಜವಳಿ
ರವರ ಕಚೇರಿ

ಕರ್ನಾಟಕ ಸರ್ಕಾರ

ನಂ.86, ಶುಭೋದಯ ಕಾಂಪ್ಲೆಕ್ಸ್
ರೈಲ್ವೆ ಸಮನಾಂತರ ರಸ್ತೆ,
ಕುಮಾರ ಪಾರ್ಕ್ ಪಶ್ಚಿಮ,
ಬೆಂಗಳೂರು – 560 020

ಸಂಖ್ಯೆ:ಕೈಜಇ/ಜವಳಿ/ಟಿ-1/ಕೋವಿಡ್-19/ವಿ.ಮಗ್ಗ.ಪರಿಹಾರ/2020-21 ದಿನಾಂಕ:10.06.2020.

## ಸುತ್ತೋಲೆ

ವಿಷಯ: **"ಕೋವಿಡ್-19 ಪ್ರಯುಕ್ತ ವಿದ್ಯುತ್ ಮಗ್ಗ ನೇಕಾರರಿಗೆ ಆರ್ಥಿಕ ಬೆಂಬಲ"** ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ನೇರ ನಗದು ವರ್ಗಾವಣೆ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ: ವಾಕೈ 49 JAKY 2020, ದಿನಾಂಕ: 26.05.2020.
2) ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ: 29.05.2020.

>>>>0<<<<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 ಸಾಂಕ್ರಾಮಿಕ ರೋಗದ ಹರಡುವಿಕೆಯನ್ನು ತಡೆಗಟ್ಟಲು ದೇಶಾದ್ಯಂತ ಲಾಕ್‌ಡೌನ್ ಜಾರಿಗೊಳಿಸಲಾಗಿರುತ್ತದೆ. ಲಾಕ್‌ಡೌನ್ ಕಾರಣದಿಂದಾಗಿ ದೈನಂದಿನ ಚಟುವಟಿಕೆಗಳು ಸ್ಥಗಿತಗೊಂಡಿದ್ದು, ಇದರಿಂದ ನೇಕಾರರು ಸಹ ಸಂಕಷ್ಟಕ್ಕೊಳಗಾಗಿರುತ್ತಾರೆ. ನೇಕಾರರು ಸಂಕಷ್ಟದಲ್ಲಿರುವುದನ್ನು ಮನಗಂಡು ಸರ್ಕಾರವು **ರಾಜ್ಯದಲ್ಲಿರುವ 1.25 ಲಕ್ಷ ವಿದ್ಯುತ್ ಚಾಲಿತ ಘಟಕ(ಮಗ್ಗ)ಗಳಲ್ಲಿ ಕೆಲಸ ಮಾಡುತ್ತಿರುವ ಕೂಲಿ ಕಾರ್ಮಿಕರಿಗೆ ರೂ.2,000/-ಗಳ ಒಂದು ಬಾರಿಯ ಪರಿಹಾರಧನವನ್ನು** ಘೋಷಿಸಲಾಗಿರುತ್ತದೆ. ಅದರಂತೆ ಉಲ್ಲೇಖ(1) ರಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಮಾರ್ಗಸೂಚಿಯನ್ನು ಹೊರಡಿಸಲಾಗಿರುತ್ತದೆ.

ಉಲ್ಲೇಖ(2) ರ ಈ ಕಛೇರಿ ಪತ್ರದಲ್ಲಿ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಪೂರ್ವಭಾವಿ ಸಿದ್ಧತೆಗಳನ್ನು ಕೈಗೊಳ್ಳಲು ತಿಳಿಸಲಾಗಿರುತ್ತದೆ.

ಮುಂದುವರೆದು, ಸದರಿ ಯೋಜನೆಯಡಿ ವಿದ್ಯುತ್ ಮಗ್ಗ ನೇಕಾರರ ಮಾಹಿತಿಯನ್ನು ತ್ವರಿತಗತಿಯಲ್ಲಿ ಆನ್‌ಲೈನ್‌ನಲ್ಲಿ ನೊಂದಣಿ ಮಾಡಲು ಈ ಕೆಳಕಂಡಂತೆ ನಿರ್ವಹಿಸುವುದು.

- ಜಿಲ್ಲಾ ಮಟ್ಟದ ಅಧಿಕಾರಿಗಳು (DOs) ಮತ್ತು ಡಾಟಾ ಎಂಟ್ರಿ ಅಪರೇಟರ್ (DEO) ಲಾಗಿನ್ ಐ.ಡಿ.ಯನ್ನು ಈ ಪತ್ರದೊಂದಿಗೆ ಲಗತ್ತಿಸುತ್ತಾ, ಇದರ ಪಾಸ್ವರ್ಡ್‌ನ್ನು ನೇರವಾಗಿ ನಿಮ್ಮ ಮೊಬೈಲ್‌ಗೆ ಕಳುಹಿಸಲಾಗುವುದು.
- ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ (DOs) ಮತ್ತು ಡಾಟಾ ಎಂಟ್ರಿ ಅಪರೇಟರ್ (DEO) ಗಳಿಗೆ ನೀಡಲಾಗಿರುವ ಪಾಸ್ವರ್ಡ್, ಡಿಫಾಲ್ಟ್ ಪಾಸ್ವರ್ಡ್ ಆಗಿರುವುದರಿಂದ ಲಾಗಿನ್ ಆದ ಕೂಡಲೇ ಪಾಸ್ವರ್ಡ್ ಬದಲಾವಣೆಯನ್ನು ತಮ್ಮ ಹಂತದಲ್ಲಿಯೇ ಮಾಡಿಕೊಳ್ಳತಕ್ಕದ್ದು.
- ಲಾಗಿನ್ ಬಳಸಿ ಡಾಟಾ ಎಂಟ್ರಿಯನ್ನು ಕಡ್ಡಾಯವಾಗಿ ನುರಿತ ಸಿಬ್ಬಂದಿಗಳಿಂದ ಆನ್‌ಲೈನ್ ಮುಖಾಂತರ ಇಲಾಖೆಯ ಅಧಿಕಾರಿಗಳ ಮೇಲ್ವಿಚಾರಣೆಯಲ್ಲಿ ನಿರ್ವಹಿಸತಕ್ಕದ್ದು.
- ಜಂಟಿ ನಿರ್ದೇಶಕರು ತಮ್ಮ ವಲಯ / ವಿಭಾಗವಾರು ಜಿಲ್ಲೆಗಳ ತ್ವರಿತಗತಿಯಲ್ಲಿ ಪ್ರಗತಿ ಸಾಧಿಸಲು ಕ್ರಮವಹಿಸುವುದು ಹಾಗೂ ದಿನ ನಿತ್ಯದ ಪ್ರಗತಿ ವರದಿಯನ್ನು ಈ ಪತ್ರದಲ್ಲಿ ಲಗತ್ತಿಸಿರುವ ನಿಗದಿತ ನಮೂನೆಯಲ್ಲಿ Google spreadsheet ನಲ್ಲಿ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

- ವಿಭಾಗ / ಜಿಲ್ಲಾ ಮಟ್ಟದ ಅಧಿಕಾರಿಗಳು ಉಲ್ಲೇಖಿತ ಸರ್ಕಾರದ ಆದೇಶದನ್ವಯ ಕ್ರಮವಹಿಸತಕ್ಕದ್ದು.
- ಘಟಕದ ಮಾಲೀಕರುಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಮುಚ್ಚಳಿಕೆ ಪತ್ರ ಹಾಗೂ ಈ ಕೆಳಕಂಡ ದಾಖಲಾತಿಗಳನ್ನು ಪಡೆಯತಕ್ಕದ್ದು.
  - ➢ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಕೂಲಿ ಕಾರ್ಮಿಕರು ಸ್ವಯಂ ದೃಢೀಕರಿಸಿದ ಆಧಾರ್ ಕಾರ್ಡ್ ಪ್ರತಿಗಳು.
  - ➢ ಆಧಾರ್ ಮಾಹಿತಿಯನ್ನು ಡಿ.ಬಿ.ಟಿ ಗಾಗಿ ಬಳಕೆ ಮಾಡಲು ಕಾರ್ಮಿಕರ ಒಪ್ಪಿಗೆ ಪತ್ರಗಳು.
  - ➢ ವಿದ್ಯುತ್ ಮಗ್ಗ ಘಟಕದ ಮುಂದೆ ವಿದ್ಯುತ್ ಮಗ್ಗ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಫಲಾನುಭವಿಗಳ ಗುಂಪಿನ ಫೋಟೋ.
  - ➢ ಘಟಕದ ವಿದ್ಯುತ್ ಸಂಪರ್ಕ ಹೊಂದಿರುವ ಆರ್.ಆರ್.ನಂ.ನ ವಿದ್ಯುತ್ ಬಿಲ್.
  - ➢ ಘಟಕವು ಬಾಡಿಗೆ / ಲೀಸ್ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದರೆ ದಾಖಲಾತಿಯನ್ನು ಒದಗಿಸುವುದು.
  - ➢ ಘಟಕದ ಉದ್ಯೋಗ್ ಆಧಾರ್ / ಪಿ.ಎಂ.ಟಿ / ಉದ್ದಿಮೆದಾರರ ಪರವಾನಿಗೆ ಪತ್ರದ ಪ್ರತಿ.
  - ➢ ಘಟಕದಲ್ಲಿ ಕಾರ್ಯನಿರ್ವಹಿಸುವ ಕೂಲಿ ನೇಕಾರರ ವಿವರಗಳನ್ನು ಒಳಗೊಂಡ ಮಜೂರಿ ಪಾವತಿಯ ಪ್ರತಿ(ಲಭ್ಯವಿದ್ದಲ್ಲಿ).
- ನೋಂದಣಿ ಕೇಂದ್ರಕ್ಕೆ ಘಟಕದ ಮಾಲೀಕರುಗಳು ತಮ್ಮ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಕಾರ್ಮಿಕರುಗಳ ಮಾಹಿತಿ / ದಾಖಲಾತಿಗಳನ್ನು ಒದಗಿಸತಕ್ಕದ್ದು.
- ಫಲಾನುಭವಿಗಳಿಂದ ಪಡೆದ ದಾಖಲಾತಿಗಳನ್ನು ಜಿಲ್ಲಾ ಮಟ್ಟದ ಕಛೇರಿಯಲ್ಲಿ ಸಂಗ್ರಹಿಸಿಡತಕ್ಕದ್ದು.
- ಈ ಯೋಜನೆಯ ಅನುಷ್ಠಾನದಲ್ಲಿ ಕುಂದು ಕೊರತೆಗಳು ಇದ್ದಲ್ಲಿ ನೋಡಲ್ ಅಧಿಕಾರಿಯಾದ ಉಪ ನಿರ್ದೇಶಕರು (ಜವಳಿ) ಇವರನ್ನು ಸಂಪರ್ಕಿಸುವುದು.

ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ
ನಿರ್ದೇಶಕರು, ಕೈಮಗ್ಗ ಮತ್ತು ಜವಳಿ

**ಇವರಿಗೆ,**

1) ಜಂಟಿ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಉತ್ತರ, ದಕ್ಷಿಣ, ಪೂರ್ವ ಮತ್ತು ಪಶ್ಚಿಮ ವಲಯ / ವಿಭಾಗ.
2) ಉಪ / ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ................................................ ಜಿಲ್ಲೆ.
3) ಕಛೇರಿ / ಹೆಚ್ಚುವರಿ ಪ್ರತಿ.